**ಮಾನ್ಯ ವಿಧಾನಪರಿಷತ್ ಸದಸ್ಯರುಗಳಾದ ಶ್ರೀ ಎನ್.ಅಪ್ಪಾಜಿಗೌಡ, ಶ್ರೀ ಎಂ.ಎ.ಗೋಪಾಲಸ್ವಾಮಿ ಹಾಗೂ ಶ್ರೀ ಹೆಚ್.ಎಂ.ರಮೇಶ್ ಗೌಡ ಇವರುಗಳು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ.**

**********

**ವಿಷಯ:-**

ದೂರದ ಗ್ರಾಮೀಣ ಭಾಗಗಳಿಂದ ವಿದ್ಯಾಭ್ಯಾಸದ ಸಲುವಾಗಿ ಬರುವಂತ ಹಲವು ಬಡ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ವಸತಿನಿಲಯಗಳಲ್ಲಿ ವಸತಿಗಾಗಿ ಅರ್ಜಿಗಳನ್ನು ಹಾಕುವುದು ಸರಿಯಷ್ಟೇ. ಆದರೆ, ಸದರಿ ಹಾಸ್ಟೆಲ್-ಗಳಲ್ಲಿ ಸೀಟುಗಳ ಸಾಮರ್ಥ್ಯ ತೀರಾ ಕಡಿಮೆ ಇರುವುದು ಗಮನಿಸಬೇಕಾದ ಸಂಗತಿ. ಇದರಿಂದಾಗಿ ಭವಿಷ್ಯದ ಕನಸನ್ನು ಇಟ್ಟುಕೊಂಡು ಬರುವಂತೆ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ತುಂಬಾ ತೊಂದರೆಯಾಗುತ್ತಿರುತ್ತದೆ. ವಸತಿ ವ್ಯವಸ್ಥೆ ಸೂಕ್ತ ರೀತಿಯಲ್ಲಿ ದೊರಕದೇ ಇರುವುದರಿಂದ, ನಗರದ ಪ್ರದೇಶಗಳಲ್ಲಿ ಸದರಿ ವಿದ್ಯಾರ್ಥಿಗಳು ಪರಿತಪಿಸುವಂತಾಗುತ್ತದೆ. ಮುಂದುವರೆದು, ಕಾಲೇಜು ಹಾಸ್ಟೆಲ್- ಗಳಲ್ಲಿನ ಶುಲ್ಕವು ಹೆಚ್ಚಿನ ಪ್ರಮಾಣದಲ್ಲಿರುವುದರಿಂದ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ನಗರ ಭಾಗಗಳಲ್ಲಿ ವಿದ್ಯಾಭ್ಯಾಸಿಸಲು ಕಷ್ಟ ಸಾಧ್ಯವಾಗುತ್ತಿರುತ್ತದೆ. ಈ ಬಡ ವಿದ್ಯಾರ್ಥಿಗಳ ಪೋಷಕರು ಸಹ ಆರ್ಥಿಕವಾಗಿ ದುರ್ಬಲರಿರುತ್ತಾರೆ. ಈ ಎಲ್ಲಾ ವಾಸ್ತವಿಕ ಅಂಶಗಳ ಹಿನ್ನೆಲೆಯಲ್ಲಿ ಬಿ.ಸಿ.ಎಂ ಹಾಸ್ಟೆಲ್ ಗಳನ್ನು ಇನ್ನೂ ಹೆಚ್ಚಿಸಿ, ದೂರದ ಗ್ರಾಮೀಣ ಭಾಗಗಳಿಂದ ವಿದ್ಯಾಭ್ಯಾಸದ ಸಲುವಾಗಿ ಬರುವಂತ ವಿದ್ಯಾರ್ಥಿಗಳಿಗೆ ವಸತಿ ನಿಲಯಗಳಲ್ಲಿ ವಸತಿ ವ್ಯವಸ್ಥೆಯನ್ನು ಸೂಕ್ತ ರೀತಿಯಲ್ಲಿ ಕಲ್ಪಿಸಿಕೊಟ್ಟು ಅನುಕೂಲ ಮಾಡಿಕೊಡುವ ಬಗ್ಗೆ.

**ಗಮನ ಸೆಳೆಯುವ ಸೂಚನೆಗೆ ಉತ್ತರ:-**

ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಶೈಕ್ಷಣಿಕ ಉತ್ತೇಜನಕ್ಕಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸಿ, ಈ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಉಚಿತವಾಗಿ ಊಟ, ವಸತಿ, ಸಮವಸ್ತ್ರ, ಮತ್ತು ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿ, ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ ಹಂತವನ್ನು ಉನ್ನತೀಕರಿಸಿಕೊಳ್ಳಲು ಈ ಮೂಲಕ ನೆರವು ನೀಡಲಾಗುತ್ತಿದೆ.

ಪ್ರಸ್ತುತ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ 1301 ಮೆಟ್ರಿಕ್-ಪೂರ್ವ ಹಾಗೂ 1137 ಮೆಟ್ರಿಕ್-ನಂತರದ ಹೀಗೆ ಒಟ್ಟು 2438 ಸರ್ಕಾರಿ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಒಟ್ಟು 192736 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶದ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ. ವಿವರ ಈ ಕೆಳಕಂಡಂತಿದೆ.

| ಕ್ರ. ಸಂ. | ವಿವರ | ವಿದ್ಯಾರ್ಥಿನಿಲಯಗಳ ಸಂಖ್ಯೆ | | | ವಿದ್ಯಾರ್ಥಿಗಳ ಮಂಜೂರಾತಿ ಸಂಖ್ಯೆ | | |
|---|---|---|---|---|---|---|---|
| | | ಬಾಲಕರು | ಬಾಲಕಿಯರು | ಒಟ್ಟು | ಬಾಲಕರು | ಬಾಲಕಿಯರು | ಒಟ್ಟು |
| 1 | ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳು | 1010 | 291 | 1301 | 54060 | 15896 | 69956 |
| 2 | ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳು | 509 | 628 | 1137 | 55063 | 67717 | 122780 |
| | ಒಟ್ಟು | 1519 | 919 | 2438 | 109123 | 83613 | 192736 |

...2

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಲ್ಲಿ ನಿಗಧಿಪಡಿಸಿರುವ ಮಂಜೂರಾತಿ ಸಂಖ್ಯೆಗನುಗುಣವಾಗಿ ಪ್ರವೇಶ ನಿಯಮಗಳನುಸಾರ ಪ್ರವರ್ಗವಾರು ಅರ್ಹ ವಿದ್ಯಾರ್ಥಿಗಳಿಗೆ ದಾಖಲಾತಿಯನ್ನು ಕಲ್ಪಿಸಲಾಗುತ್ತದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸುವ ದೃಷ್ಟಿಯಿಂದ ಸರ್ಕಾರದ ಆದೇಶ ಸಂಖ್ಯೆ ಬಿಸಿಡಬ್ಲ್ಯೂ 352 ಬಿಎಂಎಸ್ 2019, ದಿನಾಂಕ 21.01.2020ರಲ್ಲಿ ರಾಜ್ಯದ ವಿವಿಧ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಲ್ಲಿ ಸಂಖ್ಯಾಬಲ ಹೆಚ್ಚಳ ಮಾಡಲಾಗಿದ್ದು, ಒಟ್ಟಾರೆ 332 ಮೆಟ್ರಿಕ್-ನಂತರದ ಬಾಲಕರ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ 5180 ಸಂಖ್ಯಾಬಲವನ್ನು ಹೆಚ್ಚಳ ಮಾಡಲಾಗಿರುತ್ತದೆ.

ಪ್ರಸ್ತುತ, 2020-21ನೇ ಸಾಲಿನಲ್ಲಿಯೂ ಸಹ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳ ಒಟ್ಟು ಸಂಖ್ಯಾಬಲದಲ್ಲಿ ಶೇ.5 ರಷ್ಟು ಸಂಖ್ಯಾಬಲ ಹೆಚ್ಚಳ ಮಾಡುವಂತೆ ಕೋರಿ ಪ್ರಸ್ತಾಪಿಸಲಾಗಿರುತ್ತದೆ ಹಾಗೂ ಈ ಸಂಬಂಧ 2021-22ನೇ ಸಾಲಿನ ಆಯವ್ಯಯ ಭಾಷಣದಲ್ಲಿ 5000 ವಿದ್ಯಾರ್ಥಿಗಳ ಸಂಖ್ಯಾಬಲ ಹೆಚ್ಚಳಕ್ಕೆ ಘೋಷಣೆ ಮಾಡಲಾಗಿರುತ್ತದೆ.

ಮುಂದುವರೆದು, ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ, ಪ್ರವೇಶ ದೊರಕದ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪರ್ಯಾಯವಾಗಿ ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆಯಡಿ ಅನುದಾನದ ಲಭ್ಯತೆಯನುಸಾರ 10 ತಿಂಗಳ ಅವಧಿಗೆ ಪ್ರತಿ ವಿದ್ಯಾರ್ಥಿಗೆ ರೂ.15,000/-ಗಳನ್ನು ಮಂಜೂರು ಮಾಡಲಾಗುತ್ತಿದೆ.

ಆದಾಗ್ಯೂ, ಬೇಡಿಕೆಗನುಗುಣವಾಗಿ ಹೊಸ ವಿದ್ಯಾರ್ಥಿನಿಲಯಗಳ ಮಂಜೂರಾತಿಯು ರಾಜ್ಯದ ಒಟ್ಟಾರೆ ಬೇಡಿಕೆ ಹಾಗೂ ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನದ ಲಭ್ಯತೆಯನ್ನು ಆಧರಿಸಿರುತ್ತದೆ.

**ಸಂ:**ಬಿಸಿಡಬ್ಲ್ಯೂ 257 ಬಿಎಂಎಸ್ 2021

**(ಕೋಟ ಶ್ರೀನಿವಾಸ ಪೂಜಾರಿ)**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**